ಕರ್ನಾಟಕ ವಿಧಾನ ಸಭೆ, ಸಂಶೋಧನಾ ಹಾಗೂ ಉಲ್ಲೇಖನಾ ಶಾಖೆ
KARNATAKA LEGISLATIVE ASSEMBLY RESEARCH AND REFERENCE BRANCH

ಪತ್ರಿಕಾ ತುಣುಕುಗಳು
PAPER CLIPPINGS

ಇಲಾಖೆ / ವಿಷಯ : DEPARTMENT / SUBJECT: ಚುನಾವಣೆ

ಪತ್ರಿಕೆಯ ಹೆಸರು : NAME OF THE NEWS PAPER: ಕನ್ನಡ ಪ್ರಭ ದಿನಾಂಕ : DATE : 25/09/2019


# ಪರಿಷತ್ ಕ್ಷೇತ್ರಗಳ ಮತಪಟ್ಟಿ ಪರಿಷ್ಕರಣೆ

## ಶಿಕ್ಷಕರ, ಪದವೀಧರ ಮೇಲ್ಮನೆ ಕ್ಷೇತ್ರದ ಮತದಾರರ ಪಟ್ಟಿಗೆ ಅ.1ರಿಂದ ಹೆಸರು ಸೇರ್ಪಡೆ

• **ಕನ್ನಡಪ್ರಭ ವಾರ್ತೆ** ಬೆಂಗಳೂರು 25/9/19

ಶಿಕ್ಷಕರ ಮತ್ತು ಪದವೀಧರ ಕ್ಷೇತ್ರದಿಂದ ಮೇಲ್ಮನೆಗೆ ನಡೆಯುವ ಚುನಾವಣೆ ಹಿನ್ನೆಲೆಯಲ್ಲಿ ಅ.1ರಿಂದ ಮತದಾರರ ಪಟ್ಟಿ ಪರಿಷ್ಕರಣೆ ಕಾರ್ಯ ಪ್ರಾರಂಭವಾಗಲಿದ್ದು, ಮತದಾರರು ಹೆಸರು ಸೇರ್ಪಡೆ ಮಾಡಿಕೊಳ್ಳಬೇಕು ಎಂದು ರಾಜ್ಯ ಮುಖ್ಯ ಚುನಾವಣಾಧಿಕಾರಿ ಸಂಜೀವ್ ಕುಮಾರ್ ತಿಳಿಸಿದ್ದಾರೆ.

ಆಯೋಗದ ಕಚೇರಿಯಲ್ಲಿ ಮಂಗಳವಾರ ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಅವರು, ವಿಧಾನಪರಿಷತ್‌ಗೆ ಆಗ್ನೇಯ ಪದವೀಧರ ಕ್ಷೇತ್ರದಿಂದ ಆಯ್ಕೆಯಾಗಿರುವ ಚೌಡರೆಡ್ಡಿ ತೂಪಲ್ಲಿ, ಪಶ್ಚಿಮ ಪದವೀಧರ ಕ್ಷೇತ್ರದ ಎಸ್.ವಿ. ಸಂಕನೂರು, ಈಶಾನ್ಯ ಶಿಕ್ಷಕರ ಕ್ಷೇತ್ರದ ಶರಣಪ್ಪ ಮಟ್ಟೂರು, ಬೆಂಗಳೂರು ಶಿಕ್ಷಕರ ಕ್ಷೇತ್ರದ ಪುಟ್ಟಣ್ಣ ಅವರ ಅವಧಿಯು 2020ರ ಜೂ.30ಕ್ಕೆ ಅಂತ್ಯವಾಗಲಿದೆ. ಈ ಕ್ಷೇತ್ರಗಳಿಗೆ ಚುನಾವಣೆ ನಡೆಸಬೇಕಿರುವ ಕಾರಣ ಮತದಾರ ಪಟ್ಟಿ ಪರಿಷ್ಕರಣೆ ಕಾರ್ಯವನ್ನು ಅ.1 ರಿಂದ ಆರಂಭಿಸಲಾಗುತ್ತಿದೆ ಎಂದು ಹೇಳಿದರು.

### ಕ್ಷೇತ್ರ ವ್ಯಾಪ್ತಿ

**ಪಶ್ಚಿಮ ಪದವೀಧರ ಕ್ಷೇತ್ರ:** ಧಾರವಾಡ, ಹಾವೇರಿ, ಗದಗ ಮತ್ತು ಉತ್ತರ ಕನ್ನಡ ಜಿಲ್ಲೆ.

**ಆಗ್ನೇಯ ಪದವೀಧರ ಕ್ಷೇತ್ರ:** ಚಿತ್ರದುರ್ಗ, ದಾವಣಗೆರೆ (ಚನ್ನಗಿರಿ, ಹೊನ್ನಾಳಿ, ಹರಪನಹಳ್ಳಿ ಹೊರತುಪಡಿಸಿ), ತುಮಕೂರು, ಕೋಲಾರ, ಚಿಕ್ಕಬಳ್ಳಾಪುರ ಜಿಲ್ಲೆ.

**ಈಶಾನ್ಯ ಶಿಕ್ಷಕರ ಕ್ಷೇತ್ರ:** ಬೀದರ್, ಕಲಬುರಗಿ, ಯಾದಗಿರಿ, ರಾಯಚೂರು, ಕೊಪ್ಪಳ, ಬಳ್ಳಾರಿ ಮತ್ತು ಹರಪನಹಳ್ಳಿ ತಾಲೂಕು.

**ಬೆಂಗಳೂರು ಶಿಕ್ಷಕರ ಕ್ಷೇತ್ರ:** ಬೆಂಗಳೂರು, ಬೆಂಗಳೂರು ಗ್ರಾಮಾಂತರ ಮತ್ತು ರಾಮನಗರ.

### ಈ ಹಿಂದೆ ನೋಂದಣಿ ಆಗಿದ್ದರೂ ಮತ್ತೆ ಪಟ್ಟಿಗೆ ಹೆಸರು ಸೇರಿಸಬೇಕು

ಶಿಕ್ಷಕರ ಕ್ಷೇತ್ರಕ್ಕೆ ನೋಂದಣಿ ಮಾಡುವವರು ಮೂರು ವರ್ಷ ಒಂದೇ ಸಂಸ್ಥೆಯಲ್ಲಿ ಪೂರ್ಣಾವಧಿ ಶಿಕ್ಷಕರಾಗಿ ಕೆಲಸ ಮಾಡಿರಬೇಕು ಎಂದು ರಾಜ್ಯ ಮುಖ್ಯ ಚುನಾವಣಾಧಿಕಾರಿ ಸಂಜೀವ್ ಕುಮಾರ್ ತಿಳಿಸಿದ್ದಾರೆ.

ಆರು ವರ್ಷ ಶಿಕ್ಷಕ ಸೇವಾನುಭವ ಇದ್ದು, ಮೂರು ವರ್ಷ ಒಂದೇ ಸಂಸ್ಥೆಯಲ್ಲಿ ಪೂರ್ಣಾವಧಿ ಶಿಕ್ಷಕರಾಗಿ ಕಾರ್ಯ ನಿರ್ವಹಿಸಿರಬೇಕು. ಇದರ ಪ್ರಮಾಣ ಪತ್ರವನ್ನು ಆಯೋಗಕ್ಕೆ ಸಲ್ಲಿಸಬೇಕಾಗಿದೆ. ಯಾವುದೇ ಕ್ಷೇತ್ರದಲ್ಲಿ ಕೆಲಸ ಮಾಡುತ್ತಿದ್ದರೂ ತಾವು ವಾಸವಿರುವ ಸ್ಥಳದಲ್ಲಿಯೇ ನೋಂದಣಿಗೆ ಅರ್ಜಿ ಸಲ್ಲಿಸಬೇಕು ಎಂದು ಹೇಳಿದರು.

ಪದವೀಧರ ಕ್ಷೇತ್ರಕ್ಕೆ ನೊಂದಣಿ ಮಾಡಿಕೊಳ್ಳುವವರು ದೇಶದ ಯಾವುದೇ ಭಾಗದಲ್ಲಿ ಪದವಿ ಪಡೆದಿದ್ದರೂ ತಾವು ನೆಲೆಸಿರುವ ಸ್ಥಳದಲ್ಲಿಯೇ ನೋಂದಣಿ ಮಾಡಿಕೊಳ್ಳಬೇಕು. ಅರ್ಜಿ ಸಲ್ಲಿಸುವವರ ವಿಳಾಸದ ದಾಖಲಾತಿ ಸೇರಿದಂತೆ ಅಗತ್ಯ ದಾಖಲೆಗಳನ್ನು ಸಲ್ಲಿಸುವುದು ಕಡ್ಡಾಯ. ಈ ಹಿಂದೆ ನೋಂದಣಿಯಾಗಿದ್ದರೂ ಸಹ ಈ ಬಾರಿ ಮತ್ತೊಮ್ಮೆ ಹೊಸದಾಗಿ ನೋಂದಣಿ ಮಾಡಿಕೊಳ್ಳುವುದು ಅಗತ್ಯ ಇದೆ ಎಂದರು.